Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬಿಬಿಎಂಪಿ/ವಾ.22/ಜೆ.ಸಿ ಉ/ಪಿಆರ್/40/2020–21

ಸಹಾಯಕ ಅಭಿಯಂತರರ ಕಛೇರಿ
ಜೆ.ಸಿ ನಗರ ಉಪ–ವಿಭಾಗ, ಪೂರ್ವ ವಿಭಾಗ
ವಿ. ನಾಗೇನಹಳ್ಳಿ, ವಾರ್ಡ್ ನಂ;22
ಬೆಂಗಳೂರು – 560032.
ದಿನಾಂಕ: 21–12–2021

## ದಿನಾಂಕ; 21–12–2021 ರಂದು ವಾರ್ಡ್ ಸಮಿತಿ ಸಭೆಯ ನಡವಳಿಗಳು;–

- ಶ್ರೀ. ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ಮುನಿರಾಮಣ್ಣ, ವಾರ್ಡ್ ಅಧ್ಯಕರು, ಸದಸ್ಯರು
- ಶ್ರೀ. ಮೋಹನ್ ರೆಡ್ಡಿ, ಸದಸ್ಯರು
- ಶ್ರೀಮತಿ ಉಷಾರಾಣಿ, ಕಲ್ಯಾಣ ಇಲಾಖೆ
- ಶ್ರೀ. ಅಮ್ಜದ್ ಅಹಮದ್, ಕೆ.ಆರ್.ಡ್ಲ್ಯೂ.ಎ ಅಧ್ಯಕ್ಷರು
- ಶ್ರೀ. ಉದಯ್ ಚಂದನ್, ಕೆ.ಆರ್.ಡ್ಲ್ಯೂ.ಎ ಸದಸ್ಯರು
- ಶ್ರೀ. ಚಂದ್ ಪಾಷ, ಕೆ.ಆರ್.ಡ್ಲ್ಯೂ.ಎ ಸದಸ್ಯರು
- ಶ್ರೀ. ಎಸ್. ವಿಜಯ್ ಕುಮಾರ್ ಸದಸ್ಯರು
- ಶ್ರೀ. ಕುಮಾರ್, ಸದಸ್ಯರು
- ಶ್ರೀ. ಸುನೀಲ್, ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮತಿ ಕಾರ್ಯದರ್ಶಿಗಳಾದ ಶ್ರೀ. ಗುರುಸಿದ್ದಪ್ಪ .ಜಿ ವಾರ್ಡ್ ಸಮಿತಿ ಅಧ್ಯಕ್ಷರು, ಸಮಿತಿಯ ಸದಸ್ಯರುಗಳು ಹಾಗೂ ವಾರ್ಡ್ ಸಂಖ್ಯೆ: 22ರ ನಾಗರೀಕರು ಹಾಗೂ ಎಲ್ಲ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಿದರು.

ಶ್ರೀ. ಗುರುಸಿದ್ದಪ್ಪ. ಜಿ ವಾರ್ಡ್ ಕಾರ್ಯದರ್ಶಿಗಳು ಸಭೆಗೆ ಹಾಜರಿದ್ದ ಅಧಿಕಾರಿಗಳ ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು, ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು, ಹಾಗೂ ದಿನಾಂಕ; 29–11–2021 ರಂದು ನಡೆದ

Bruhat Bengaluru
Mahanagara Palike

ವಾರ್ಡ್ ಸಮಿತಿಯ ನಡವಳಿಗಳನ್ನು ಪುನರಾವಲೋಕನ ಮಾಡಲಾಯಿತು. ಹಿಂದಿನ ಸಭೆಯಲ್ಲಿ ತೆಗೆದುಕೊಂಡಿದ್ದ ತೀರ್ಮಾನಗಳನ್ನು ಕುರಿತು ಈ ದಿನಾಂಕದವರೆಗೆ ನಿರ್ವಹಿಸಿದ ಕೆಲಸಗಳ ಬಗ್ಗೆ ಸದಸ್ಯರುಗಳಿಗೆ ತಿಳಿಸಲಾಯಿತು.

- ಶ್ರೀ. ಉದಯ್ ಚಂದನ್, ಕೆ.ಆರ್.ಡ್ಲ್ಯೂ.ಎ ಸದಸ್ಯರು ಮಾತನಾಡುತ್ತಾ, 10ನೇ ಕ್ರಾಸ್ ಕನಕನಗರ ರಸ್ತೆಯಲ್ಲಿರುವ ಮ್ಯಾನ್ ಹೋಲ್ ಬಳಿ ಇರುವ ಮಣ್ಣನ್ನು ತೆಗೆದು ರಸ್ತೆಯನ್ನು ಸ್ವಚ್ಛಗೊಳಿಸುವಂತೆ ತಿಳಿಸಿದರು.
- ಶ್ರೀ. ಚಂದ್ ಪಾಷ, ಕೆ.ಆರ್.ಡ್ಲ್ಯೂ.ಎ ಸದಸ್ಯರು ಮಾತನಾಡುತ್ತಾ, 17ನೇ ಕ್ರಾಸ್ ಕನಕನಗರದ ರಸ್ತೆಯು ತೀರಾ ಹಾಳಾಗಿರುವುದರಿಂದ ಮರು ಡಾಂಬರೀಕರಣ ಮಾಡುವುದು ಹಾಗೂ 20ನೇ ಕ್ರಾಸ್ ಕನಕನಗರದ ರಸ್ತೆಯಲ್ಲಿ ಗುಂಡಿ ಬಿದ್ದಿರುವುದರಿಂದ ಗುಂಡಿಯನ್ನು ವೆಟ್ ಮಿಕ್ಸ್ ನಿಂದ ಮತ್ತು ಡಾಂಬರಿನಿಂದ ಗುಂಡಿಯನ್ನು ಮುಚ್ಚುವಂತೆ ತಿಳಿಸಿದರು.
- ಶ್ರೀ ಗುರುಸಿದ್ದಪ್ಪ, ಸಹಾಯಕ ಅಭಿಯಂತರರು ಮಾತನಾಡುತ್ತಾ, ವಾರ್ಡ್‌ನ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಅಲ್ಲಲ್ಲಿ ಬಿದ್ದಿರುವ ಗುಂಡಿಗಳನ್ನು ವೆಟ್ ಮಿಕ್ಸ್ ಮತ್ತು ಡಾಂಬರಿನಿಂದ ಗುಂಡಿಗಳನ್ನು ಮುಚ್ಚುವ ಕಾಮಗಾರಿ ಪ್ರಗತಿಯಲ್ಲಿರುವ ಬಗ್ಗೆ ಸಭೆಗೆ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಲಾಯಿತು.
- ಶ್ರೀ. ಮುನಿರಾಮಣ್ಣ, ವಾರ್ಡ್ ಅಧ್ಯಕ್ಷರು ಮಾತನಾಡುತ್ತಾ, ಭುವನೇಶ್ವರಿನಗರ ಕುಶಲಪ್ಪ ಬಡಾವಣೆ ಹಾಗೂ ಸನ್‌ರೈಸ್ ಕಾಲೋನಿಯ ಅಚಾರ್ಯ ಕಾಲೇಜಿನ ಹತ್ತಿರ ಗುಂಡಿಗಳು ಬಿದ್ದಿರುವುದರಿಂದ ಶೀಘ್ರವಾಗಿ ಗುಂಡಿಗಳನ್ನು ಮುಚ್ಚುವಂತೆ ತಿಳಿಸಿದರು ಹಾಗೂ ಕನಕನಗರದ 18ನೇ ಕ್ರಾಸ್‌ನ ರಸ್ತೆಯ ಮುಂಭಾಗದಲ್ಲಿ ರಸ್ತೆ ಅಗಲೀಕರಣ ಮಾಡುವ ಬಗ್ಗೆ ಚರ್ಚಿಸಲಾಯಿತ್ತು.
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 +ve ಕೇಸ್‌ಗಳು ಹೆಚ್ಚಾಗುತ್ತಿದ್ದು, ವಾರ್ಡಿನಲ್ಲಿ ಈಗಾಗಲೇ ಕೋವಿಡ್ ವ್ಯಾಕ್ಷಿನೇಶನ್ ಅನ್ನು 45 ವರ್ಷ ಮೇಲ್ಪಟ್ಟವರಿಗೆ ಹಾಗೂ 18 ವರ್ಷ ಮೇಲ್ಪಟ್ಟ ಜನರಿಗೆ ಮೊದಲ ಹಾಗೂ ಎರಡನೇ ಡೋಸ್ ವ್ಯಾಕ್ಷಿನೇಶನ್ ನೀಡುತ್ತಿರುವ ಬಗ್ಗೆ ತಿಳಿಸಿದರು.
- ವಾರ್ಡ್‌ನ ಮುಖ್ಯರಸ್ತೆಗಳಲ್ಲಿ ಕಸ ಹಾಕುವ ಸ್ಥಳಗಳಲ್ಲಿ ಮಾರ್ಷಲ್‌ಗಳನ್ನು ಹಾಕಬೇಕು ಮತ್ತು ಜನರಿಗೆ ವ್ಯಾಕ್ಷಿನೇಶನ ಬಗ್ಗೆ ತಿಳಿಯಲು ವ್ಯಾನ್‌ನ ಮುಖಾಂತರ ವ್ಯಾಕ್ಷಿನೇಶನ್ ಅನ್ನು ಹಾಕಲಾಗುತ್ತಿದೆ ಎಂದು ತಿಳಿಸಿದರು.
- ಶ್ರೀ. ಮೋಹನ್ ರೆಡ್ಡಿ, ಸದಸ್ಯರು ಮಾತನಾಡುತ್ತಾ, ಮನ್ನಾರಾಯನ ಪಾಳ್ಯ, ಮುನೇಶ್ವರ ಲೇಔಟ್‌ನ 1ನೇ ಮುಖ್ಯರಸ್ತೆ ನೆಚರ್ ವಿವ್ ಅಪಾರ್ಟ್‌ಮೆಂಟ್ ಹತ್ತಿರ ಸಾರ್ವಜನಿಕರು ನೀರಿನ ಸಮಸ್ಯೆ ಎದುರಿಸುತ್ತಿರುವುದರಿಂದ ಹೊಸದಾಗಿ ನೀರಿನ ಕೊಳವೆ ಬಾವಿ ಹಾಕುವಂತೆ ತಿಳಿಸಿದರು.
- ಶ್ರೀ ಅಜ್ಜದ್ ಅಹಮ್ಮದ್, ಕೆ.ಆರ್.ಡ್ಲ್ಯೂ.ಎ ಅಧ್ಯಕ್ಷರು ಮಾತನಾಡುತ್ತಾ, 10ನೇ 'ಎ' ಕ್ರಾಸ್ ನಲ್ಲಿ ಗುಂಡಿಗಳು ಬಿದ್ದಿರುವುದರಿಂದ ಹಾಗೂ ರಸ್ತೆಯಲ್ಲಿ ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಶೀಘ್ರವಾಗಿ ಸರಿಪಡಿಸುವಂತೆ ತಿಳಿಸಿದರು.
- ಭುವನೇಶ್ವರಿನಗರದ ಸರ್ಕಲ್ ನಲ್ಲಿ ಸಾರ್ವಜನಿಕರು ಕಸ ಹಾಕಿರುವುದರಿಂದ ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿ ಶೀಘ್ರವಾಗಿ ಸ್ವಚ್ಚಗೊಳಿಸುವಂತೆ ತಿಳಿಸಿದರು.

Bruhat Bengaluru
Mahanagara Palike

- ಶ್ರೀ. ಎಸ್. ವಿಜಯ್ ಕುಮಾರ್ ಸದಸ್ಯರು ಮಾತನಾಡುತ್ತಾ, 2ನೇ 'ಎ' ಕ್ರಾಸ್ ಕನಕನಗರ ರಸ್ತೆಯಲ್ಲಿ ಎಲ್.ಇ.ಡಿ ಬಲ್ಪ್ ಹಾಳಾಗಿರುವುದರಿಂದ ಕೂಡಲೇ ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸಿ ಸರಿಪಡಿಸುವಂತೆ ತಿಳಿಸಿದರು.
- ಶ್ರೀ. ಮುನಿರಾಮಣ್ಣ, ವಾರ್ಡ್ ಅಧ್ಯಕರು ಮಾತನಾಡುತ್ತಾ, ಕನಕನಗರದ 20ನೇ ಕ್ರಾಸ್ ರಸ್ತೆಯು ತೀರಾ ಹಾಳಾಗಿದ್ದು, ರಸ್ತೆಯನ್ನು ಮರು ಡಾಂಬರೀಕರಣ ಮಾಡುವಂತೆ ತಿಳಿಸಿದರು.
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ದಕ್ಷಿಣ ಆಫ್ರಿಕಾದಲ್ಲಿ ಕೋವಿಡ್ +ve ಕೇಸ್ ಗಳು ಹೆಚ್ಚಾಗುತ್ತಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಮುಂಜಾಗ್ರತ ಕ್ರಮವಹಿಸುತ್ತೀರುವ ಬಗ್ಗೆ ತಿಳಿಸಿದರು ಹಾಗೂ ಡೆಂಗ್ಯೂ ಜ್ವರ ಬರುವ ಸಾಧ್ಯತೆ ಹೆಚ್ಚು ಇರುವುದರಿಂದ ಅದನ್ನು ತಡೆಗಟ್ಟುವ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಕೋವಿಡ್ ವಾಷಿನೇಶನ್‌ಅನ್ನು ಮೊದಲನೇಯ ಡೋಸ್ ಶೇಕಡ 95% ರಷ್ಟು ಹಾಗೂ ಎರಡನೇ ಡೋಸ್ ಶೇಕಡ 75% ರಷ್ಟು ಕೋವಿಡ್ ಲಸಿಕೆಯನ್ನು ನೀಡಲಾಗಿದ್ದು, ಸರ್ಕಾರದ ಆದೇಶದಂತೆ ಮುಂಬರುವ ದಿನಗಳಲ್ಲಿ ಮಾಸ್ಕ್ ಅನ್ನು ಕಡ್ಡಾಯವಾಗಿ ಧರಿಸಬೇಕಾಗಿರುತ್ತದೆ, ತಪ್ಪಿದ್ದಲ್ಲಿ ದಂಡವನ್ನು ವಿಧಿಸುವ ಸಾಧ್ಯತೆ ಇದೆ ಎಂದು ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ನಿಂದ ಮೃತಪಟ್ಟ ವ್ಯಕ್ತಿಗಳ ಕುಟುಂಬದವರಿಗೆ ಸರ್ಕಾರದಿಂದ ಕೋವಿಡ್ ಪರಿಹಾರ ನಿಧಿಗೆ ಸಾರ್ವಜನಿಕರು ಅರ್ಜಿಗಳನ್ನು ಸಲ್ಲಿಸುವ ಬಗ್ಗೆ ತಿಳಿಸಿದರು ಹಾಗೂ ಅದಕ್ಕೆ ಸಂಬಂಧಪಟ್ಟ ದಾಖಲಾತಿಗಳು ಮತ್ತು ಅದರ ಅನುಕೂಲತೆಗಳ ಬಗ್ಗೆ ಹಾಜರಿದ್ದ ಸದಸ್ಯರಿಗೆ ವಿವರಣೆ ನೀಡಿದರು.
- ಶ್ರೀ ಸುನೀಲ್, ಸದಸ್ಯರು ಮಾತನಾಡುತ್ತಾ, ವಾರ್ಡ್‌ನ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆಗಳಲ್ಲಿ ಜಿಯೋ ಕೇಬಲ್‌ನ ಕಾಮಗಾರಿಯು ಪ್ರಗತಿಯಲ್ಲಿದ್ದು, ಅಲ್ಲಲ್ಲಿ ಗುಂಡಿಗಳನ್ನು ಅಗೆದು ಹಾಗೂ ಸರಿಯಾಗಿ ಗುಂಡಿಗಳನ್ನು ಮುಚ್ಚದೇ ಇರುವುದರಿಂದ ಕೂಡಲೇ ಅವರ ಮೇಲೆ ಕ್ರಮಕೈಗೊಳ್ಳುವಂತೆ ತಿಳಿಸಿದರು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯವನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳು ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಕೈಗೊಂಡಕ್ರಮದ ಬಗ್ಗೆ ವರದಿ ಪೂರ್ಣಗೊಂಡ ಭಾವಚಿತ್ರ ಹಾಗೂ ಲಿಖಿತ ವರದಿ ತಯಾರಿಸಿಕೊಂಡು ಹಾಜರಾಗಲು ಸೂಚಿಸಿ ಹಾಗೂ ಹಾಜರಾಗದೆ ಇರುವ ಅಧಿಕಾರಿಗಳು ಮುಂದಿನ ಸಭೆಯಲ್ಲಿ ಹಾಜರಾಗಿರಬೇಕೆಂದು ಸೂಚಿಸಿದರು. ಸಭೆಯನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಗುರುಸಿದ್ದಪ್ಪ .ಜಿ ರವರ ವಂದನಾರ್ಪಣೆಯೊಂದಿಗೆ ಮಧ್ಯಾಹ್ನ 12;45ಕ್ಕೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಗುರುಸಿದ್ದಪ್ಪ .ಜಿ)
ವಾರ್ಡ್ ಸಮಿತಿ ಕಾರ್ಯದರ್ಶಿ
ಹಾಗೂ
ಸಹಾಯಕ ಅಭಿಯಂತರರು ವಾರ್ಡ್ ನಂ:22